ತುಂಗಾ ತೀರದಿ ನಿಂತ ಸುಯತಿವರನ್ಯಾರೆ ಪೇಳಮ್ಮಯ್ಯ

ಸಂಗೀತಪ್ರಿಯ ಮಂಗಲಸುಗುಣತರಂಗ ಮುನಿಕುಲೋತ್ತುಂಗ ಕಾಣಮ್ಮ ||

ಚೆಲುವ ಸುಮುಖ ಫಣೆಯಲ್ಲಿ ತಿಲಕ ನಾಮಗಳು ನೋಡಮ್ಮ

ಜಲಮಣಿಯ ಕೊರಳಲ್ಲಿ ತುಲಸಿಮಾಲೆಗಳು ಪೇಳಮ್ಮ

ಸುಲಲಿತ ಕಮಂಡಲು ದಂಡವನೆ ಧರಿಸಿಹನೆ ನೋಡಮ್ಮ

ಕ್ಷುಲ್ಲ ಹಿರಣ್ಯಕನಲ್ಲಿ ಜನಿಸಿದ ಪ್ರಹ್ಲಾದನು ತಾನಿಲ್ಲಿಹನಮ್ಮ ||೧||

ಸುಂದರ ಚರಣಾರವಿಂದಕೆ ಭಕುತಿಯಲಿಂದ ನೋಡಮ್ಮ

ವಂದಿಸಿ ಸ್ತುತಿಸುವ ಭೂಸುರವೃಂದ ನೋಡಮ್ಮ

ಚಂದದಲಂಕೃತಿಯಿಂದ ಶೋಭಿಸುವಾನಂದ ನೋಡಮ್ಮ

ಹಿಂದೆ ವ್ಯಾಸಮುನಿಯೆಂದೆನಿಸಿದ ಕರ್ಮಂದಿಗಳ ರಸಫದಿಂದ ರಹಿತನೆ ||೨||

ಅಭಿನವ ಜನಾರ್ಧನ ವಿಠಲನ ಧ್ಯಾನಿಸುವ ನೋಡಮ್ಮ

ಅಭಿವಂದಿಸಿದವರಿಗೆ ಅಖಿಲಾರ್ಥವ ಸಲ್ಲಿಸುವ ನೋಡಮ್ಮ

ನಭಮಣಿಯಂದದಿ ವಿವಿಧದಿ ಶೋಭಿಸುವ ನೋಡಮ್ಮ

ಶುಭಗುಣನಿಧಿ ರಾಘವೇಂದ್ರ ಗುರು ಅಬುಜಭವಾಂಡದಿ ಪ್ರಬಲ ಕಾಣಮ್ಮ ||೩||